## **ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಶ್ರೀ ಎ.ಪಿ. ಶಿವಕುಮಾರ್, ಸ.ಕೃ.ನಿ. ಕಡೂರು ಚಿಕ್ಕಮಗಳೂರು ಜಿಲ್ಲೆ ಇವರ ಮೇಲಿನ ಲೋಕಾಯುಕ ಟ್ರ್ಯಾಪ್ ಪ್ರಕರಣಕ್ಕೆ ಸಂಬಂಧಿಸಿದಂತೆ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಕುರಿತು.

ಓದಲಾಗಿದೆ: 1) ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ದಿನಾಂಕ:19-7-2011.

-0-

**ಪ್ರಸ್ತಾವನೆ:-**

ಮೇಲೆ (1)ರಲ್ಲಿ ಓದಲಾದ [redacted] ಪತ್ರದಲ್ಲಿ ಅಪರ ಪೋಲೀಸ್ ಮಹಾನಿರ್ದೇಶಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಶ್ರೀ ಎ.ಪಿ. ಶಿವಕುಮಾರ್, ಸ.ಕೃ.ನಿ.ರು ಕಡೂರು ತಾ: ಚಿಕ್ಕಮಗಳೂರು ಜಿಲ್ಲೆ ಇವರು ಶ್ರೀ ಹೆಚ್. ರಮೇಶ್ ಬಿನ್ ಹುಲಿಯಪ್ಪ, ಸೋಮದೇವರಗುಡಿ ಬಿ.ಜಿ. ಕಡೂರು ಟೌನ್, ಚಿಕ್ಕಮಗಳೂರು ಜಿಲ್ಲೆ ಇವರಿಗೆ ತುಂತುರು ನೀರಾವರಿ ಘಟಕ ಯೋಜನೆಯಡಿ ಸ್ಪ್ರಿಂಕ್ಲರ್ ಸೆಟ್‌ನ್ನು ನೀಡುವ ಸಂಬಂಧದಲ್ಲಿ ಅವರಿಂದ ಅಕ್ರಮವಾಗಿ ಲಂಚ ಪಡೆಯುತ್ತಿದ್ದಾಗ ಕರ್ನಾಟಕ ಲೋಕಾಯುಕ್ತದ ಅಧಿಕಾರಿಗಳಿಗೆ ಸಿಕ್ಕಿಬಿದ್ದ ಪ್ರಯುಕ್ತ ಅವರ ಮೇಲಿನ ಸುಗಮವಾದ ತನಿಖೆಗೆ ಅನುಕೂಲವಾಗುವಂತೆ ಅವರನ್ನು ಅಮಾನತ್ತಿನಲ್ಲಿಡುವಂತೆ ಹಾಗೂ ಅವರ ಲೀನ್‌ನ್ನು ಬೇರೆ ಕಡೆಗೆ ವರ್ಗಾಯಿಸುವಂತೆ ಕೋರಿರುತ್ತಾರೆ.

ಅಪರ ಪೋಲೀಸ್ ಮಹಾನಿರ್ದೇಶಕರು ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಕೋರಿಕೆಯಂತೆ ಶ್ರೀ ಎ.ಪಿ. ಶಿವಕುಮಾರ್, ಸಹಾಯಕ ಕೃಷಿ ನಿರ್ದೇಶಕರು, ಕಡೂರು ತಾ: ಚಿಕ್ಕಮಗಳೂರು ಜಿಲ್ಲೆ ಇವರನ್ನು ಅವರ ಮೇಲಿನ ಲೋಕಾಯುಕ್ತದ ತನಿಖೆಯನ್ನು ಬಾಕಿಯಿರಿಸಿ ಅಮಾನತ್ತಿನಲ್ಲಿರಿಸಲು ಮತ್ತು ಅವರ ಲೀನ್‌ನ್ನು ಕೃಷಿ ನಿರ್ದೇಶನಾಲಯಕ್ಕೆ ವರ್ಗಾಯಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಕೃಇ 37 ಕೃಪವಿ 2011**
**ಬೆಂಗಳೂರು ದಿನಾಂಕ: 23-8-2011**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎ.ಪಿ.ಶಿವಕುಮಾರ್, ಸಹಾಯಕ ಕೃಷಿ ನಿರ್ದೇಶಕರು, ಕಡೂರು, ಚಿಕ್ಕಮಗಳೂರು ಜಿಲ್ಲೆ ಇವರ ವಿರುದ್ಧದ ಲೋಕಾಯುಕ್ತದ ತನಿಖೆಯನ್ನು ಬಾಕಿಯಿರಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ 10(1) (ಎ) ರನ್ವಯ ಕೂಡಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಸೇವೆಯಿಂದ ಅಮಾನತ್ತುಗೊಳಿಸಿದೆ, ಹಾಗೂ ಅವರ ಲೀನ್‌ನ್ನು ಕೃಷಿ ನಿರ್ದೇಶನಾಲಯಕ್ಕೆ ವರ್ಗಾಯಿಸಿ ಆದೇಶಿಸಿದೆ.

...2.

32

ಸದರಿಯವರು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಂಶ ಭತ್ಯೆಗೆ ಅರ್ಹರಿರುತ್ತಾರೆ, ಹಾಗೂ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Manjunath P

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ) ಬೆಂಗಳೂರು
2) ಆಯುಕ್ತರು ಕೃಷಿ/ ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು.
3) ಜಂಟಿ ಕೃಷಿ ನಿರ್ದೇಶಕರು, ಚಿಕ್ಕಮಗಳೂರು ಜಿಲ್ಲೆ
4) ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ
5) ಸಂಬಂಧಪಟ್ಟ ಅಧಿಕಾರಿಗೆ (ಕೃಷಿ ಆಯುಕ್ತರ ಮೂಲಕ)
6) ಸರ್ಕಾರದ ಕಾರ್ಯದರ್ಶಿಗಳು ಕೃಷಿ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
7) ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
8) ಸರ್ಕಾರದ ಉಪ ಕಾರ್ಯದರ್ಶಿಗಳು, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ
9) ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು